(2) ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕ, 2011

ಶ್ರೀ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

2. ವಿತ್ತೀಯ ಕಾರ್ಯಕಲಾಪಗಳು

2011–12ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮಂಡನೆ ಮತ್ತು ಚರ್ಚೆ:

ಅಭಿಯಾಚನೆ ಕ್ರಮಾಂಕ 01 – ಕೃಷಿ ಮತ್ತು ತೋಟಗಾರಿಕೆ